ಇ) 2012–13 ನೇ ಸಾಲಿನಲ್ಲಿ ಶೇ.25 ರ ಪ್ರಮಾಣದಲ್ಲಿ ಮೀಸಲಾತಿ ನೀಡದೆ ಇರುವ ಶಾಲೆಗಳ ಸಂಖ್ಯೆ 72. ಅಂತಹ ಶಾಲೆಗಳ ವಿರುದ್ಧ ಕಾನೂನುರೀತ್ಯಾ ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಈ) ಅಂತಹ ಶಾಲೆಗಳ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದೆಂದು ಈಗಾಗಲೇ ಸಾರ್ವಜನಿಕ ಪ್ರಕಟಣೆಯನ್ನು ನೀಡಲಾಗಿದೆ.

ರಾಜ್ಯದಲ್ಲಿ ಕಡ್ಡಾಯ ಶಿಕ್ಷಣ ಯೋಜನೆಯ ಅನುಷ್ಠಾನ

333(381); ಡಾ: ಗುರುಪಾದಪ್ಪ ನಾಗಮಾರಹಳ್ಳಿ (ಬೀದರ್)

ಅ) ರಾಜ್ಯ ಸರ್ಕಾರವು ಕಡ್ಡಾಯ ಶಿಕ್ಷಣ ಕಾಯ್ದೆ (ಆರ್.ಟಿ.ಇ) ಅನ್ನು ಕಟ್ಟುನಿಟ್ಟಾಗಿ ಪಾಲಿಸಲು ಬದ್ದವಾಗಿದೆಯೇ;

ಆ) ಆಗಿದ್ದಲ್ಲಿ, ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ಆರ್.ಟಿ.ಇ. ಅಡಿಯಲ್ಲಿ ಪ್ರತಿ ಜಿಲ್ಲೆಯಲ್ಲಿ ಖಾಸಗಿ ಶಾಲೆಗಳಲ್ಲಿ ಪ್ರವೇಶ ಪಡೆದುಕೊಂಡಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು? ಎಷ್ಟು ವಿದ್ಯಾರ್ಥಿಗಳಿಗೆ ಈ ಯೋಜನೆ ಅನ್ವಯ ಶಾಲಾ ಪ್ರವೇಶವನ್ನು ನೀಡುವ ಗುರಿಯನ್ನು ಹೊಂದಲಾಗಿತ್ತು? ಇದರ ಅನ್ವಯ ಯಾವ ಯಾವ ಜಿಲ್ಲೆಗಳಲ್ಲಿ ಎಷ್ಟೆಷ್ಟು ಸೀಟುಗಳು ಭರ್ತಿಯಾಗಿವೆ? ಮತ್ತು ಎಷ್ಟೆಷ್ಟು ಸೀಟುಗಳು ಖಾಲಿಯಾಗಿವೆ;

ಇ) ಈ ಕಾಯ್ದೆಯಡಿಯಲ್ಲಿ ಕೆಲವು ಗೊಂದಲುಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಆಗಿದ್ದಲ್ಲಿ ಇದನ್ನು ಪರಿಹರಿಸಲು ಸರ್ಕಾರ ಮಾರ್ಗ ಸೂಚಿಗಳನ್ನು ಹೊರಡಿಸಿದೆಯೇ? ಹೊರಡಿಸಿದ್ದಲ್ಲಿ ಈ ಮಾರ್ಗಸೂಚಿಗಳೇನು;

ಈ) ಮುಂಬರುವ ಶೈಕ್ಷಣಿಕ ವರ್ಷದಿಂದ ಆರ್.ಟಿ ಇ ಯೋಜನೆಯನ್ನು ಸಮರ್ಪಕವಾಗಿ ಜಾರಿಗೊಳಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಕಿಮ್ಮನೆ ರತ್ನಾಕರ್ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ರಾಜ್ಯ ಸರ್ಕಾರವು ಕಡ್ಡಾಯ ಶಿಕ್ಷಣ ಕಾಯ್ದೆ (ಆರ್ ಟಿ ಇ) ಅನ್ನು ಕಟ್ಟುನಿಟ್ಟಾಗಿ ಪಾಲಿಸಲು ಬದ್ಧವಾಗಿದೆ

ಆ)

ದಾಖಲಾದ ವಿದ್ಯಾರ್ಥಿಗಳು	ಗುರಿ	ಭರ್ತಿಯಾದ ಸೀಟುಗಳು	ಖಾಲಿ ಇರುವ ಸೀಟುಗಳು
72596	108344	72596	31748

ಇ) ಕಾಯ್ದೆಯ ಅಡಿಯಲ್ಲಿ ಗೊಂದಲಗಳಿರುವುದಿಲ್ಲ, ಆದಾಗ್ಯೂ ಕಾಯ್ದೆಯ ಅನುಷ್ಠಾನಕ್ಕೆ ಅಗತ್ಯವಾದ ಮಾರ್ಗಸೂಚಿಗಳನ್ನು ರಚನಾತ್ಮಕವಾದ ಅನುಷ್ಠಾನಕ್ಕಾಗಿ ಅಗತ್ಯವಾದ ಮಾರ್ಪಾಡುಗಳನ್ನು ಮಾಡಲಾಗಿದೆ.

ಈ) 2014–15 ನೇ ಸಾಲಿಗೆ ಆರ್.ಟಿ.ಇ ಕಾಯ್ದೆ ಸೆಕ್ಷನ್ 12(1) (ಸಿ) ಯನ್ನು ಸಮರ್ಪಕವಾಗಿ ಜಾರಿಗೊಳಿಸಲು ಇಲಾಖೆಯ ಅಧಿಕಾರಿಗಳಿಗೆ ಸುತ್ತೋಲೆ, ಸಾರ್ವಜನಿಕ ಪ್ರಕಟಣೆ ಮತ್ತು ವೇಳಾಪಟ್ಟಿಯನ್ನು ಪ್ರಕಟಿಸಲಾಗಿದೆ.

ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆಯ ಉಲ್ಲಂಘನೆ ಪ್ರಕರಣಗಳು

338(526); ಶ್ರೀ ಹ್ಯಾರಿಸ್ ಎನ್.ಎ (ಶಾಂತಿನಗರ)

ಅ) ರಾಜ್ಯದಲ್ಲಿ ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆಯ ಸೌಲಭ್ಯವನ್ನು ಶೈಕ್ಷಣಿಕ ವರ್ಷದಲ್ಲಿ ಎಷ್ಟು ಜನರಿಗೆ ದೊರಕಿಸಿಕೊಡಲಾಗಿದೆ;

ಆ) ಆರ್.ಟಿ.ಇ ಕಾಯ್ದೆಯ ಉಲ್ಲಂಘನೆ ಎಷ್ಟು ಪ್ರಕರಣಗಳನ್ನು ದಾಖಲಿಸಿಕೊಳ್ಳಲಾಗಿದೆ? ಉಲ್ಲಂಘನೆ ಮಾಡಿರುವ ಶಿಕ್ಷಣ ಸಂಸ್ಥೆಗಳ ಕುರಿತು ಸರ್ಕಾರ ಕೈಗೊಂಡಿರುವ ಕಾನೂನು ಕ್ರಮಗಳೇನು;

ಇ) ಆರ್.ಟಿ.ಇ ಕುರಿತ ಸಮಗ್ರ ಮಾಹಿತಿ ಸಂಗ್ರಹಣೆಯ ಪ್ರಮುಖ ಅಂಶಗಳೇನು? ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ